ಮಂಗಳವಾರ 20.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 121
Digital Varthe Kannada Daily
Volume 01 - Issue 121
Tuesday 20.01.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

# ಶಿಕ್ಷಣ ಮತ್ತು ಸಾಮಾಜಿಕ ಸೇವೆಗೆ ರಾಷ್ಟ್ರ ಪ್ರಶಸ್ತಿ

**ಬೆಂಗಳೂರು:**ರಾಷ್ಟ್ರೀಯ ಯುವ ದಿನ ಸ್ವಾಮಿ ವಿವೇಕಾನಂದರ ಜನ್ಮದಿನಾ ಚರಣೆಯ ಅಂಗ ವಾಗಿ, ಶಿಕ್ಷಣ ಮತ್ತು ಸಾಮಾಜಿಕ ಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆಯನ್ನು ಗುರುತಿಸಿ ದಿ ಇಂಡಿಯನ್ ಫೋರಂ ವತಿಯಿಂದ ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿ ರಾಜ್ಯಾಧ್ಯಕ್ಷರಾದ ಶ್ರೀ ಆನಂದ್ ಸಿ. ತಿರುಮಲ ಅವರಿಗೆ Swami Vivekananda National Inspiration Awards – 2026 ರಾಷ್ಟ್ರ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ.

ಬಿ.ಎ. ಪತ್ರಿಕೋದ್ಯಮ, ಎಂ.ಎ. ಸಮಾಜಶಾಸ್ತ್ರ ವಿದ್ಯಾಭ್ಯಾಸ ಪಡೆದಿರುವ ಆನಂದ್ ಸಿ. ತಿರುಮಲ ಅವರು, ಕಳೆದ ಹಲವು ವರ್ಷಗಳಿಂದ ಸಮಾಜದ ನಿರ್ಲಕ್ಷಿತ ವರ್ಗಗಳ, ಯುವ ಜನರು, ರೈತರು, ಕೂಲಿಕಾರ್ಮಿಕರ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಟ ನಡೆಸುತ್ತಾ ಬಂದಿದ್ದಾರೆ. ವಿಶೇಷವಾಗಿ ಪುರುಷರ ಕಲ್ಯಾಣ, ಕುಟುಂಬ ನ್ಯಾಯ, ಮಾನಸಿಕ ಆರೋಗ್ಯ, ಸಾಮಾಜಿಕ ಸಮಾನತೆ ಹಾಗೂ ಕಾನೂನು ಜಾಗೃತಿ ವಿಷಯಗಳಲ್ಲಿ ಅವರು ಸಲ್ಲಿಸಿರುವ ಸೇವೆ ಗಮನಾರ್ಹವಾಗಿದೆ.

ಪುರುಷರ ಸಮಸ್ಯೆಗಳ ಕುರಿತು ಸಾರ್ವಜನಿಕ ಜಾಗೃತಿ ಮೂಡಿಸುವುದು, ಸರ್ಕಾರದ ಗಮನ ಸೆಳೆಯುವುದು ಹಾಗೂ ಸಮನ್ಯಾಯದ ವ್ಯವಸ್ಥೆಗಾಗಿ ಹೋರಾಟ ನಡೆಸುವ ಉದ್ದೇಶದಿಂದ ಸ್ಥಾಪಿತವಾದ ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿಯನ್ನು ರಾಜ್ಯಮಟ್ಟದಲ್ಲಿ ಸಂಘಟಿಸಿ, ಪರಿಣಾಮಕಾರಿ ಸಾಮಾಜಿಕ ಚಳವಳಿಯಾಗಿ ರೂಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ.



ಸ್ವಾಮಿ ವಿವೇಕಾನಂದರ ಆದರ್ಶವಾದ "ಸೇವೆಯೇ ಸಾದನೆ" ಎಂಬ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡು, ಶಿಕ್ಷಣ ಮತ್ತು ಸಾಮಾಜಿಕ ಸೇವೆಯನ್ನು ಸಮರ್ಪಣೆಯೊಂದಿಗೆ ನಡೆಸುತ್ತಿರುವುದನ್ನು ಪರಿಗಣಿಸಿ, ಸ್ವಾಮಿ ವಿವೇಕಾನಂದರ ಜನ್ಮದಿನವನ್ನು ಭಾರತದಲ್ಲಿ ಪ್ರತಿ ವರ್ಷ ಜನವರಿ 12 ರಂದು ರಾಷ್ಟ್ರೀಯ ಯುವ ದಿನಾಚರಣೆ ಯಾಗಿ ಆಚರಿಸಲಾಗುತ್ತದೆ. ಈ ದಿನದಂದು ಯುವಜನರನ್ನು ಸ್ಫೂರ್ತಿಗೊಳಿಸಲು ಮತ್ತು ದೇಶದ ಅಭಿವೃದ್ಧಿಗೆ ಅವರ ಶಕ್ತಿಯನ್ನು ಸದುಪಯೋಗಪಡಿಸಿಕೊಳ್ಳುವಂತೆ ಪ್ರೋತ್ಸಾಹಿಸಲು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಭಾರತ ಸರ್ಕಾರವು 1984 ರಲ್ಲಿ ಈ ದಿನವನ್ನು ರಾಷ್ಟ್ರೀಯ ಯುವ ದಿನವೆಂದು ಘೋಷಿಸಿತು.

ಸ್ವಾಮಿ ವಿವೇಕಾನಂದರ ಜನ್ಮದಿನಾ ಚರಣೆಯ ವಿಶೇಷ ಸಂದರ್ಭದಲ್ಲಿ ದಿ ಇಂಡಿಯನ್ ಫೋರಂ ಈ ರಾಷ್ಟ್ರ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಈ ಗೌರವ ಲಭಿಸಿರುವುದಕ್ಕೆ ವಿವಿಧ ಸಂಘಟನೆಗಳ ಮುಖಂಡರು, ಸಮಾಜಸೇವಕರು, ಶಿಕ್ಷಣ ತಜ್ಞರು ಹಾಗೂ ಸಾರ್ವಜನಿಕರು ಆನಂದ್ ಸಿ. ತಿರುಮಲ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಪ್ರಕ್ರಿಯ ಆಸ್ಪತ್ರೆ ಬಡವರ್ಗದ ನೂರು ಜನರಿಗೆ ಉಚಿತ ಕ್ಯಾನ್ಸರ್ ಶಸ್ತ್ರ ಚಿಕಿತ್ಸೆ: ಡಾ. ಶ್ರೀನಿವಾಸ್ ಚಿರಕುರಿ



**ಪೀಣ್ಯ ದಾಸರಹಳ್ಳಿ** ಎಂಟನೇ ಮೈಲಿಯಲ್ಲಿರುವ ಪ್ರಕ್ರಿಯ ಆಸ್ಪತ್ರೆಯ ಸಪ್ತ ವಾರ್ಷಿಕೋತ್ಸವ ಸಮಾರಂಭದಲ್ಲಿ, ಈ ವರ್ಷ ಬಡವರ್ಗದ 100 ಕ್ಯಾನ್ಸರ್ ರೋಗಿಗಳಿಗೆ ಉಚಿತ ಶಸ್ತ್ರಚಿಕಿತ್ಸೆ ನೀಡಲಾಗುವುದೆಂದು ಆಸ್ಪತ್ರೆಯ ಸಿಇಒ ಡಾ. ಶ್ರೀನಿವಾಸ್ ಚಿರಕುರಿ ಘೋಷಿಸಿದರು.

ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ನೂತನ ಅಂಕೋಲಜಿ (ಕ್ಯಾನ್ಸರ್) ವಿಭಾಗವನ್ನು ಆರಂಭಿಸಲಾಗಿದ್ದು, ಆದ್ವಿಕಾ ಕೇರ್ ಫೌಂಡೇಶನ್ ಎಂಬ ಎನ್‌ಜಿಒ ಸಂಸ್ಥೆಯ ಸಹಯೋಗದೊಂದಿಗೆ ಅನೇಕ ಬಡ ರೋಗಿಗಳಿಗೆ ಉಚಿತ ಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗುತ್ತಿದೆ ಎಂದರು.

ಭಾರತದ ನಂಬರ್ ಒನ್ ರೋಬೋಟಿಕ್ ಸರ್ಜರಿ ತಂತ್ರಜ್ಞಾನವನ್ನು ಆಸ್ಪತ್ರೆ ಅಳವಡಿಸಿಕೊಂಡಿದ್ದು, ಇದರ ಮೂಲಕ ನೋವಿಲ್ಲದೆ, ಕಡಿಮೆ ಅವಧಿಯಲ್ಲಿ ಗುಣಮುಖವಾಗುವಂತಹ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಕಳೆದ ಏಳು ವರ್ಷಗಳಲ್ಲಿ ಸಾವಿರಾರು ಯಶಸ್ವಿ ಶಸ್ತ್ರಚಿಕಿತ್ಸೆಗಳನ್ನು ಆಸ್ಪತ್ರೆ ನಡೆಸಿದೆ ಎಂದು ಅವರು ಹೇಳಿದರು.

ಆದ್ವಿಕಾ ಕೇರ್ ಫೌಂಡೇಶನ್ ಸಿಇಒ ಪಿಕೆಎಂ ಸ್ವಾಮಿ ಮಾತನಾಡಿ, ಉತ್ತಮ ಆರೋಗ್ಯವೇ ನಿಜವಾದ ಐಶ್ವರ್ಯ. ಕ್ಯಾನ್ಸರ್ ಬಗ್ಗೆ ಭಯಪಡುವುದಕ್ಕಿಂತ ಮುನ್ನೆಚ್ಚರಿಕೆ ಅತ್ಯವಶ್ಯಕ. ನಮ್ಮ ಸಂಸ್ಥೆಯ ಮೂಲಕ ರಕ್ತದಾನ ಶಿಬಿರಗಳು, ಆರೋಗ್ಯ ತಪಾಸಣಾ ಶಿಬಿರಗಳ ಮೂಲಕ ಕ್ಯಾನ್ಸರ್ ಕುರಿತು ಜಾಗೃತಿ ಹಾಗೂ ಸೇವಾ ಕಾರ್ಯಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದು ಹೇಳಿದರು.

ವಾರ್ಷಿಕೋತ್ಸವದ ಅಂಗವಾಗಿ ಆಸ್ಪತ್ರೆ ಸಿಬ್ಬಂದಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಡಾ. ಸೋಮನಾಥ ಚಟರ್ಜಿ, ಡಾ. ಅಜಯ್ಯಾ, ತೇಜಸ್ವಿನಿ, ಡಾ. ಶಿಲ್ಪಾ ಅರವಳ್ಳಿ, ಡಾ. ಅಂಕಿತಾ, ಡಾ. ಗುಣ್ಣನ್, ಕುಮಾರಿ ಲೋಲಜಾ, ಡಾ. ಸುಮನ ಪಳ್ಳೆಗಾರ್, ಡಾ. ಗುರುರಾಜ್ ಎಸ್. ಪುರಾಣಿಕ್, ಡಾ. ಸಂತೋಷ್ ಕುಮಾರ್ ಸೇರಿದಂತೆ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಾಂಗ್ರೆಸ್ ಬೆಂಬಲಿತ 8 ಅಭ್ಯರ್ಥಿಗಳಿಗೆ ಭರ್ಜರಿ ಜಯ



ಕೃಷ್ಣರಾಜಪೇಟೆ:ತಾಲ್ಲೂಕಿನ ಬೂಕನಕೆರೆ ಹೋಬಳಿಯ ಬಲ್ಲೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಆಡಳಿತ ಮಂಡಳಿಗೆ ಇಂದು ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ 8 ಅಭ್ಯರ್ಥಿಗಳು ಭರ್ಜರಿ ಗೆಲುವು ಸಾಧಿಸಿದ್ದಾರೆ

ಜೆಡಿಎಸ್ ಕೇವಲ ಒಂದು ಸ್ಥಾನ ಡೆದಿದೆ. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಬಲ್ಲೇನಹಳ್ಳಿ ರಮೇಶ್, ಪ್ರಥಮ ದರ್ಜೆ (ವಿದ್ಯುತ್ ಹಾಗೂ ಸಿವಿಲ್) ಗುತ್ತಿಗೆದಾರ ಆಡುನಿಂಗಣ್ಣನ ಬಿ.ಎಸ್.ರಾಮು, ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮೀಗೌಡ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಭರ್ಜರಿ ಗೆಲುವು ಸಾಧಿಸುವ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಚುನಾವಣೆ ಘೋಷಣೆ ಆಗುತ್ತಿದ್ದಂತೆಯೇ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ಪಟಾಕಿ ಸಿಡಿಸಿ, ಸಿಹಿ ವಿತರಣೆ ಮಾಡಿ ವಿಜಯೋತ್ಸವ ಮಾಡಿದರು.

**ಗೆಲುವು ಸಾಧಿಸಿ ಕಾಂಗ್ರೆಸ್ ಅಭ್ಯರ್ಥಿಗ ವಿವರ:** ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳಾದ ಆಡುನಿಂಗಣ್ಣನ ಬಿ.ಆರ್.ಮಹೇಶ್, ಬಿ.ಸಿ. ಅಶೋಕ್, ನಿಂಗೇಗೌಡ, ಉಮಾಶಂಕರ್, ಬಿ.ಎಲ್. ಶಿಲ್ಪಪುಟ್ಟರಾಜು, ಸಾವಿತ್ರಮ್ಮಕೃಷ್ಣೇಗೌಡ, ಬಿ.ಎಸ್. ಪುಟ್ಟರಾಜು, ಹಾಗೂ ನರಸಿಂಹಶೆಟ್ಟಿ ಭರ್ಜರಿಗೆ ಗೆಲುವು ಸಾಧಿಸಿದ್ದಾರೆ. ಎಲ್ಲಾ ಸ್ಥಾನಗಳಿಗೆ ಸ್ಪರ್ಧಿಸಿದ್ದ ಜೆಡಿಎಸ್ ಅಭ್ಯರ್ಥಿಗಳ ಬಿ.ಎಸ್. ಪ್ರಸನ್ನಕುಮಾರ್ ಮಾತ್ರ ಜಯ ಸಾಧಿಸಿದ್ದಾರೆ. ಉಳಿದ ಅಭ್ಯರ್ಥಿಗಳು ಪರಾಜಯಗೊಂಡಿದ್ದಾರೆ.

ನೂತನವಾಗಿ ಆಯ್ಕೆಯಾದ ನಿರ್ದೇಶಕರನ್ನು ಅಭಿನಂದಿಸಿ ಕಾಂಗ್ರೆಸ್ ಮುಖಂಡರಾದ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಬಲ್ಲೇನಹಳ್ಳಿ ರಮೇಶ್, ಕಾಂಗ್ರೆಸ್ ಯುವ ಮುಖಂಡ ಪ್ರಥಮ ದರ್ಜೆ (ವಿದ್ಯುತ್ ಹಾಗೂ ಸಿವಿಲ್) ಗುತ್ತಿಗೆದಾರ ಬಿ.ಎಸ್.ರಾಮು, ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮೀಗೌಡ ಮಾತನಾಡಿದರು.

ನಮ್ಮ ಕಾಂಗ್ರೆಸ್ ಅಭ್ಯರ್ಥಿ ಕಡಿಮೆ ಅಂತರದಲ್ಲಿ ಸೋತಿದ್ದು ಅವರಿಗೆ ಖಾಲಿ ಇರುವ ಸರ್ಕಾರಿ ನಾಮಿನಿ ಸದಸ್ಯ ಸ್ಥಾನಕ್ಕೆ ನೇಮಕ ಮಾಡಿಸುವ ಮೂಲಕ ಅವರಿಗೆ ನ್ಯಾಯ ಕೊಡಿಸುವ ಮುಖಂಡರಾದ ಬಲ್ಲೇನಹಳ್ಳಿ ರಮೇಶ್ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಪಟೇಲ್ ಸ್ವಾಮಿಗೌಡ, ಪಟೇಲ್ ಮಹದೇವ್, ಯೋಗಣ್ಣ, ಡೈರಿ ಕುಮಾರ್, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಶೀಳನೆರೆ ರಾಮೇಗೌಡ, ಅಣ್ಣೇಚಾಕನಹಳ್ಳಿ ನಾಗರಾಜು, ಹೊನ್ನೇನಹಳ್ಳಿ ಕೃಷ್ಣೇಗೌಡ, ಕಾಶಿಮುರುಕನಹಳ್ಳಿ ಪ್ರೀತಮ್, ಬಲ್ಲೇನಹಳ್ಳಿ ಪೆಪ್ಸಿ ದಯಾನಂದ್, ಬಿ.ಎನ್.ಮಹೇಶ್, ಜಯರಾಂ, ನಂಜಪ್ಪನ ಕುಮಾರ್, ಶಿವಣ್ಣ, ಸೊಸೈಟಿ ಅಧ್ಯಕ್ಷ ಕುಮಾರ್, ರಾಮಕೃಷ್ಣೇಗೌಡ, ಶ್ರೀನಿವಾಸ್, ಆಡುನಿಂಗಣ್ಣನ ಸ್ವಾಮಣ್ಣ, ಪುಟ್ಟರಾಜು, ದೇವರಸು, ಆನಂದೇಗೌಡ, ಸಿದ್ದಪ್ಪನ ಕೃಷ್ಣೇಗೌಡ, ಸುರೇಶ್ ಬಿ,ಹೇಮಂತ್, ರೇವಣ್ಣ, ಬಾರೆ ತಮ್ಮಣ್ಣ, ನಾಗರಾಜು, ಸೋಮು, ಕಾರ್ತೀಕ್, ಸಂತೋಷ್, ಮೋಹನ್, ಮಹೇಶ್, ರಾಮು, ಕುಮಾರ್, ನಾಗರಾಜು,ದಿನೇಶ್, ಬಸಂತ, ಮಾಜಿ ಅಧ್ಯಕ್ಷೆ ವಿನೋದಮ್ಮ, ನವೀನ್ ಕುಮಾರ್, ಪುಟ್ಟಪ್ಪ ಟೆಂಪೋ, ನ್ಯಾಯ ಬೆಲೆ ಅಂಗಡಿ ರಮೇಶ್, ಕುಮಾರ್, ಶಿವಲಿಂಗಣ್ಣ, ರಾಮಣ್ಣ, ಮಂಡಿ ಮಹದೇವ್, ಕೆ ಟಿ ಕುಮಾರ್, ಸುಬ್ಬಣ್ಣ ಸುಧಾಕರ್, ವಿಶ್ವನಾಥ್, ರೂಪೇಶ್, ಗಣೇಶ್, ಕಟ್ಟೇರಿ ಚಂದ್ರು, ಸತೀಶ್, ಶಾಂತ,ಕರುಣಾಕರ, ಹೇಮಂತ್ ಗೌಡ, ಸೇರಿದಂತೆ ಗ್ರಾಮದ ಹಿರಿಯ ಮುಖಂಡರು, ಯುವಕರು ಸೇರಿದಂತೆ ಇತರರು ಹಾಜರಿದ್ದರು. ಚುನಾವಣಾ ಧಿಕಾರಿಯಾಗಿ ವಾಸಿಂಪಾಷಾ ಕಾರ್ಯನಿರ್ವಹಣೆ ಮಾಡಿದರು.

# ಜೈಲು ಒಳಗೆ ಗಲಾಟೆ: ಕೈದಿಗಳಿಂದ, ಹಲ್ಲೆ ಸಿಬ್ಬಂದಿಗೆ ಗಾಯ




ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕೈದಿಗಳ ಅಕ್ರಮ ಚಟುವಟಿಕೆಗಳು ಮತ್ತು ಪುಂಡಾಟಕ್ಕೆ ಯಾವುದೇ ಬ್ರೇಕ್ ಬಿದ್ದಿಲ್ಲ. ಜನವರಿ 7 ರಂದು ಸಹಾಯಕ ಜೈಲರ್ ಮೇಲೆ ಇಬ್ಬರು ಕೈದಿಗಳು ಹಲ್ಲೆ ನಡೆಸಿದ ಘಟನೆ ತಡವಾಗಿ ಬೆಳಕಿಗೆ ಬಂದಿದ್ದು, ಜೈಲಿನ ಭದ್ರತಾ ವ್ಯವಸ್ಥೆಯ ವೈಫಲ್ಯವನ್ನು ಮತ್ತೊಮ್ಮೆ ಎತ್ತಿ ತೋರಿಸಿದೆ. ಹೊಸ ಡಿಜಿಪಿ ಅಲೋಕ್ ಕುಮಾರ್ ಅವರು ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಿದ ನಂತರವೂ ಈ ರೀತಿಯ ಘಟನೆಗಳು ಮುಂದುವರೆಯುತ್ತಿರುವುದು ಗಂಭೀರ ಆತಂಕಕ್ಕೆ ಕಾರಣವಾಗಿದೆ.

ಹಲ್ಲೆಯ ವಿವರಗಳು ಜನವರಿ 7ರ ಮಧ್ಯಾಹ್ನ ಸುಮಾರು 3 ಗಂಟೆ ವೇಳೆಗೆ ಜೈಲಿನ ಸಜಾಬಂಧಿ ಕಚೇರಿಗೆ ಕೈದಿಗಳಾದ ಆನಂದ್ ಮತ್ತು ಅಬ್ದುಲ್ ಘನಿ ಅನವಶ್ಯಕವಾಗಿ ನುಗ್ಗಲು ಯತ್ನಿಸಿದರು. ಅವರನ್ನು ತಡೆಯಲು ಮುಂದಾದ ಸಹಾಯಕ ಜೈಲರ್ ಮತ್ತು ಇತರ ಸಿಬ್ಬಂದಿಗೆ ಕಾಲಿನಿಂದ ಒದ್ದು ಹಲ್ಲೆ ನಡೆಸಿದ್ದಾರೆ ಎಂದು ಆರೋಪವಿದೆ. ಘಟನೆಯ ನಂತರ ಜೈಲಿನಲ್ಲಿ ಕರ್ತವ್ಯ ನಿರ್ವಹಣೆಗೆ ಭಯದ ವಾತಾವರಣ ನಿರ್ಮಾಣವಾಗಿದೆ ಎಂದು ಪ್ರಭಾರ ಅಧೀಕ್ಷಕರು ತಿಳಿಸಿದ್ದಾರೆ. ಘಟನೆಯ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ನಡೆಯುತ್ತಿದೆ.

ಜೈಲಿನಲ್ಲಿ ಮುಂದುವರೆದ ಅಕ್ರಮಗಳು ಕೆಲವು ತಿಂಗಳ ಹಿಂದೆ ಪರಪ್ಪನ ಅಗ್ರಹಾರದಲ್ಲಿ ಕೈದಿಗಳು ಮೊಬೈಲ್ ಬಳಸಿ ಡ್ಯಾನ್ಸ್ ಮಾಡುವುದು, ಮದ್ಯಪಾನ ಮಾಡುವುದು, ರೌಡಿ ಶೀಟರ್ ಗುಬ್ಬಚ್ಚಿ ಸೀನಾ ಹುಟ್ಟುಹಬ್ಬ ಆಚರಣೆ ಮಾಡುವ ವೀಡಿಯೋಗಳು ವೈರಲ್ ಆಗಿದ್ದವು. ಜೈಲಿನಲ್ಲೇ ಮದ್ಯ ತಯಾರಿಸಿ ಕುಡಿಯುತ್ತಿದ್ದ ಸಾಕ್ಷ್ಯಗಳೂ ಪತ್ತೆಯಾಗಿದ್ದವು. ಈ ಹಿನ್ನೆಲೆಯಲ್ಲಿ ಜೈಲು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು. ನಂತರ ಡಿಜಿಪಿ ಅಲೋಕ್ ಕುಮಾರ್ ಅವರು ಜೈಲುಗಳಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸಿದ್ದರು. ಮೊಬೈಲ್ ಜಾಮರ್‌ಗಳು, ಸಿಸಿ ಕ್ಯಾಮೆರಾ ಹೆಚ್ಚಳ, ಕೈದಿಗಳ ಮೇಲೆ ನಿಗಾ ಇರಿಸುವುದು ಸೇರಿದಂತೆ ಹಲವು ಕ್ರಮಗಳನ್ನು ಘೋಷಿಸಲಾಗಿತ್ತು.

ಆದರೂ ಕೂಡ ಈ ಘಟನೆಯು ಜೈಲಿನ ಭದ್ರತಾ ವ್ಯವಸ್ಥೆಯಲ್ಲಿ ಇನ್ನೂ ಸುಧಾರಣೆ ಬೇಕಿದೆ ಎಂಬುದನ್ನು ಸೂಚಿಸುತ್ತದೆ. ಕೈದಿಗಳು ಜೈಲಿನೊಳಗೆ ಐಷಾರಾಮಿ ಜೀವನ ನಡೆಸುತ್ತಿರುವುದು ಮತ್ತು ಸಿಬ್ಬಂದಿ ಮೇಲೆ ಹಲ್ಲೆ ನಡೆಸುವುದು ರಾಜ್ಯ ಜೈಲು ವ್ಯವಸ್ಥೆಯ ಗಂಭೀರ ಸಮಸ್ಯೆಯನ್ನು ತೋರಿಸುತ್ತದೆ. ಈ ವಿಷಯವನ್ನು ಪದೇ ಪದೇ ಎತ್ತಿ ತೋರಿಸುತ್ತಿದ್ದರೂ, ಸಂಪೂರ್ಣ ನಿಯಂತ್ರಣ ಸಾಧ್ಯವಾಗಿಲ್ಲ ಎಂಬ ಆತಂಕ ವ್ಯಕ್ತವಾಗಿದೆ.

ಪ್ರಸ್ತುತ ಜೈಲಿನಲ್ಲಿ ಭದ್ರತಾ ಕ್ರಮಗಳನ್ನು ಮತ್ತಷ್ಟು ಬಲಪಡಿಸುವಂತೆ ಮತ್ತು ದೋಷಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಗಳು ಎದ್ದಿವೆ. ಈ ಘಟನೆಯು ಜೈಲು ಸುಧಾರಣೆಗೆ ಮತ್ತೊಂದು ಎಚ್ಚರಿಕೆಯ ಗಂಟೆಯಾಗಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ 9538786812\8217606793

# ರಿಶೇಲ ಡಿಸೋಜಾ ಆತ್ಮಹತ್ಯೆ ಕೇಸ್ : ಸಿಡಿದೆದ್ದ ಕ್ರಿಶ್ಚಿಯನ್ ಸಮುದಾಯ



**ಕಾರವಾರ:** ಜೆಡಿಎಸ್ ಮುಖಂಡೆಯ ಪುತ್ರನ ಕಿರುಕುಳ ಆರೋಪಕ್ಕೆ ಸಂಬಂಧಿಸಿದಂತೆ ರಿಶೇಲ ಡಿಸೋಜಾ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣ ಇದೀಗ ಉತ್ತರ ಕನ್ನಡ ಜಿಲ್ಲೆಯ ಗ್ರಾಮಗಳ ನಡುವೆ ವೈಮನಸ್ಸಿಗೆ ಕಾರಣವಾಗಿದ್ದು, ರಾಜಕೀಯ ಪ್ರಭಾವದ ಶಂಕೆ ಮತ್ತಷ್ಟು ಗಟ್ಟಿಯಾಗುತ್ತಿದೆ. ಪ್ರಕರಣ ದ ತನಿಖೆಯಲ್ಲಿ ನಿರ್ಲಕ್ಷ್ಯ ಆರೋಪದ ಹಿನ್ನೆಲೆಯಲ್ಲಿ ಇತ್ತೀಚೆಗೆ ಕದ್ರಾ ಪೊಲೀಸ್ ಠಾಣೆಯ ಪಿಎಸ್‌ಐಯನ್ನು ಅಮಾನತು ಮಾಡಲಾಗಿದ್ದರೂ, ಮುಖ್ಯ ಆರೋಪಿಯ ಬಂಧನ ವಿಳಂಬವಾಗಿರುವುದು ಮೃತ ಯುವತಿಯ ಕುಟುಂಬ ಹಾಗೂ ಸಮುದಾಯದ ಆಕ್ರೋಶಕ್ಕೆ ಕಾರಣವಾಗಿದೆ.

ಮಗಳು ಆತ್ಮಹತ್ಯೆ ಮಾಡಿಕೊಂಡು ಇಂದು 11ನೇ ದಿನಕ್ಕೆ ಕಾಲಿಟ್ಟಿದ್ದರೂ ಇದುವರೆಗೂ ಆರೋಪಿಯನ್ನು ಬಂಧಿಸದಿರುವುದನ್ನು ಪ್ರಶ್ನಿಸಿರುವ ಮೃತ ಯುವತಿಯ ತಾಯಿ ರೀನಾ ಡಿಸೋಜಾ, ಈ ಪ್ರಕರಣದಲ್ಲಿ "ಕಾಣದ ಕೈಗಳು" ಕೆಲಸ ಮಾಡುತ್ತಿವೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

**ಕಾಣದ ಕೈಗಳು ನನ್ನ ಮಗಳ ಪ್ರಕರಣದಲ್ಲಿ ಕೆಲಸ ಮಾಡುತ್ತಿವೆ: ರೀನಾ ಡಿಸೋಜಾ**

ನಗರದಲ್ಲಿ ಮಾಧ್ಯಮ ದವರೊಂದಿಗೆ ಮಾತನಾಡಿದ ರೀನಾ ಡಿಸೋಜಾ, ನನ್ನ ಮಗಳ ಸಾವಿಗೆ ಕಾರಣರಾದ ಎಲ್ಲರಿಗೂ ಕಾನೂನುಬದ್ಧ ಶಿಕ್ಷೆ ಆಗಲೇಬೇಕು. ಒಬ್ಬ ಪಿಎಸ್‌ಐಯನ್ನು ಅಮಾನತು ಮಾಡಲಾಗಿದೆ. ಆದರೆ



ಅವರ ಮೇಲಿನವರ ಕೈವಾಡವಿಲ್ಲದೇ ಇಂತಹ ನಿರ್ಲಕ್ಷ್ಯ ಸಾಧ್ಯವೇ? ಈ ಪ್ರಕರಣದಲ್ಲಿ ಕಾಣದ ಕೈಗಳು ಕೆಲಸ ಮಾಡುತ್ತಿರುವುದು ಸ್ಪಷ್ಟವಾಗಿದೆ. ತಪ್ಪು ಮಾಡಿದವರು ಯಾರು ಇದ್ದರೂ, ಅವರು ಪೊಲೀಸ್ ಅಧಿಕಾರಿಗಳಾಗಲಿ, ವೈದ್ಯಕೀಯ ಸಿಬ್ಬಂದಿಯಾಗಲಿ, ರಾಜಕೀಯ ಹಿನ್ನೆಲೆಯವರಾಗಲಿ - ಎಲ್ಲರಿಗೂ ಶಿಕ್ಷೆ ಆಗಲೇಬೇಕು ಎಂದು ಅವರು ಆಗ್ರಹಿಸಿದರು.

**ಬೆದರಿಕೆ ಕರೆ ಬಂದಿತ್ತು ಎಂಬ ಆಘಾತಕಾರಿ ಆರೋಪ:** ನನ್ನ ಮಗಳು ಚಿರಾಗ್ ನನ್ನ ಪ್ರೀತಿಸುತ್ತಿದ್ದಳು ಎಂಬ ವಿಷಯ ನನಗೆ ಮೊದಲಿನಿಂದಲೇ ಗೊತ್ತಿರಲಿಲ್ಲ. ಈ ವಿಚಾರ ನನ್ನ ಗಮನಕ್ಕೆ ಬಂದಾಗ, ಮಗಳಿಗೆ ಒಮ್ಮೆ ಬುದ್ಧಿ ಹೇಳಿದ್ದೆ. ಅದಾದ ಬಳಿಕ ಕೆಲವು ದಿನ ನನ್ನ ಮಗಳು ಅವನೊಂದಿಗೆ ಮಾತನಾಡಿರಲಿಲ್ಲ. ಈ ಸಂದರ್ಭದಲ್ಲಿ ಅವರ ಕಡೆಯಿಂದ ಒಬ್ಬ ವ್ಯಕ್ತಿ ನನಗೆ ಕರೆ ಮಾಡಿ, 'ರಿಶೇಲ ಚಿರಾಗ್ ಜೊತೆಗೆ ಏಕೆ ಮಾತನಾಡುತ್ತಿಲ್ಲ? ಅವಳಿಗೆ ನೀನು ಏನು ಹೇಳಿದ್ದೀಯಾ? ಅವಳು ಮಾತನಾಡದಿದ್ದರೆ ಸರಿ ಇರಲ್ಲ' ಎಂದು ಬೆದರಿಕೆ ಹಾಕಿದ್ದಾನೆ. ಆದರೆ ಆಗ ನಾನು ಇದನ್ನು ಗಂಭೀರವಾಗಿ ಪರಿಗಣಿಸಿರಲಿಲ್ಲ ಎಂದು ರೀನಾ ಡಿಸೋಜಾ ಕಣ್ಣೀರಿನಿಂದ ಹೇಳಿದರು.

**20 ವರ್ಷದ ಹುಡುಗಿಯನ್ನು ಮನೆಗೆ ಕರೆದುಕೊಂಡು ಬಂದರೂ ಮೌನವೇ?:** ಅದಾದ ಬಳಿಕ ಅವರಿಬ್ಬರು ಮತ್ತೆ ಯಾವಾಗ ಪ್ರೀತಿಸಲು ಆರಂಭಿಸಿದರು



ಎಂಬುದು ನನಗೆ ಗೊತ್ತಿಲ್ಲ. ಚಿರಾಗ್ ತಾಯಿಗೆ ನನ್ನ ಮಗಳು ಅವರ ಮನೆಗೆ ಬರುತ್ತಿದ್ದಾಳೆ ಎಂಬುದು ಗೊತ್ತಿದ್ದರೆ, ಅವರು ಒಮ್ಮೆಯಾದರೂ ನನಗೆ ಕರೆ ಮಾಡಿ ಹೇಳಬೇಕಲ್ಲವಾ? 20 ವರ್ಷದ ಹುಡುಗಿಯನ್ನು ಮನೆಗೆ ಕರೆದುಕೊಂಡು ಬಂದರೂ ಏಕೆ ಮೌನವಾಗಿದ್ದರು? ಇದು ಕೂಡ ಗಂಭೀರ ಪ್ರಶ್ನೆಯಾಗಿದೆ ಎಂದು ಅವರು ಆಕ್ರೋಶ ವ್ಯಕ್ತ ಪಡಿಸಿದರು.

**ಸಾವಿಗೂ ಮುನ್ನ ಮಗಳಿಗೆ ಏನಾಯಿತು ಎಂಬ ಸತ್ಯ ಹೊರಬರಬೇಕು:** ನನ್ನ ಮಗಳು ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದ ರೀಲ್ಸ್ ಬಗ್ಗೆ ನಮಗೆ ಯಾವುದೇ ಮಾಹಿತಿ ಇರಲಿಲ್ಲ. ನನ್ನ ಮಗಳ ಸಾವಿಗೆ ನ್ಯಾಯ ಬೇಕು. ಸಾವಿಗೂ ಮುನ್ನ ಆ ಹುಡುಗ ಅವಳಿಗೆ ಏನು ಮಾಡಿದ್ದಾನೆ, ಎಲ್ಲಿಗೆ ಕರೆದುಕೊಂಡು ಹೋಗಿದ್ದಾನೆ, ಅವಳ ಮಾನಸಿಕ ಸ್ಥಿತಿಯನ್ನು ಹೇಗೆ ಹಾಳು ಮಾಡಿದ್ದಾನೆ ಎಂಬ ಸಂಪೂರ್ಣ ಸತ್ಯ ಹೊರಬರಬೇಕು. ನ್ಯಾಯ ಸಿಗುವವರೆಗೂ ನಾನು ಸುಮ್ಮನಿರುವುದಿಲ್ಲ ಎಂದು ರೀನಾ ಡಿಸೋಜಾ ಸ್ಪಷ್ಟಪಡಿಸಿದರು.

ಇದಲ್ಲದೆ, ಪ್ರಕರಣದ ಬಗ್ಗೆ ಅನುಮಾನ ಇರುವ ಕಾರಣ ಮತ್ತೊಮ್ಮೆ ಮರಣೋತ್ತರ ಪರೀಕ್ಷೆ ನಡೆಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಪೊಲೀಸ್ ಆಯುಕ್ತರಿಗೆ ಮನವಿ ಸಲ್ಲಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

**ಮೊದಲ ಮರಣೋತ್ತರ ವರದಿಯಲ್ಲಿ ಲೋಪ ಆರೋಪ:**ಕಾರವಾರ ಕ್ರಿಶ್ಚಿಯನ್ ಫೋರಂ ಅಧ್ಯಕ್ಷ ಲಿಯೋ ಲೂಯಿಸ್ ಮಾತನಾಡಿ, ಮೊದಲ ಮರಣೋತ್ತರ ವರದಿಯನ್ನು ನೋಡಿದಾಗಲೇ ಹಲವು ಲೋಪಗಳು ಕಂಡುಬರುತ್ತವೆ. ಅತ್ಯಂತ ಬೇಜವಾಬ್ದಾರಿಯಿಂದ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಕೆಲವು ವಿಷಯಗಳ ಕುರಿತು ವೈದ್ಯರನ್ನು ಪ್ರಶ್ನಿಸಿದಾಗ, 'ಪೊಲೀಸ್ ಹಿರಿಯ ಅಧಿಕಾರಿಗಳು ಈ ವಿಚಾರವನ್ನು ನಮ್ಮ ಗಮನಕ್ಕೆ ತಂದಿಲ್ಲ' ಎಂದು ವೈದ್ಯರು ಹೇಳಿರುವುದು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಒಬ್ಬ ಪಿಎಸ್‌ಐ ಅಮಾನತು ಆಗಿರುವುದು ಮಾತ್ರ ಸಾಲದು. ಈ ಪ್ರಕರಣದಲ್ಲಿ ಇನ್ನೂ ಕಾಣದ ಕೈಗಳಿವೆ. ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ವೈದ್ಯಕೀಯ ಸಿಬ್ಬಂದಿಯ ಪಾತ್ರದ ಕುರಿತು ಕೂಡ ತನಿಖೆ ನಡೆಯಬೇಕು. ಮತ್ತೊಮ್ಮೆ ಮರಣೋತ್ತರ ಪರೀಕ್ಷೆ ನಡೆಸಿ ರಿಶೇಲ ಸಾವಿಗೆ ನ್ಯಾಯ ಒದಗಿಸಬೇಕು ಎಂದು ಅವರು ಆಗ್ರಹಿಸಿದರು.

**ಪ್ರಕರಣ ಖಂಡಿಸಿ ಕಾರವಾರದಲ್ಲಿ ಪ್ರತಿಭಟನೆ:** ರಿಶೇಲ ಡಿಸೋಜಾ ಆತ್ಮಹತ್ಯೆ ಪ್ರಕರಣ ಖಂಡಿಸಿ ಜನವರಿ 20ರಂದು ಕಾರವಾರದಲ್ಲಿ ಬೃಹತ್ ಪ್ರತಿಭಟನೆ ನಡೆಸಲು ಕ್ರಿಶ್ಚಿಯನ್ ಸಂಘಟನೆ ನಿರ್ಧರಿಸಿದೆ. ಕಾರವಾರ ನಗರದ ಮಿತ್ರ ಸಮಾಜ ಸರ್ಕಲ್‌ನಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನೆ ನಡೆಸಿ, ನ್ಯಾಯಕ್ಕಾಗಿ ಒತ್ತಾಯಿಸಲಾಗುವುದು ಎಂದು ಕ್ರಿಶ್ಚಿಯನ್ ಫೋರಂ ತಿಳಿಸಿದೆ.

ಈ ಪ್ರಕರಣವು ಈಗ ಕೇವಲ ಒಂದು ಕುಟುಂಬದ ನೋವಲ್ಲದೆ, ಜಿಲ್ಲೆಯಾದ್ಯಂತ ನ್ಯಾಯ, ಕಾನೂನು ಸುವ್ಯವಸ್ಥೆ ಹಾಗೂ ರಾಜಕೀಯ ಪ್ರಭಾವದ ಪ್ರಶ್ನೆಯನ್ನು ಎತ್ತಿ ಹಿಡಿದಿದ್ದು, ಮುಂದಿನ ದಿನಗಳಲ್ಲಿ ಇದು ಇನ್ನಷ್ಟು ದೊಡ್ಡ ಹೋರಾಟಕ್ಕೆ ಕಾರಣವಾಗುವ ಲಕ್ಷಣಗಳು ಕಾಣಿಸುತ್ತಿವೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಕಳಪೆ ಕಾಮಗಾರಿ ಹೆಸರಲ್ಲಿ ಹಣಕ್ಕೆ ಡಿಮ್ಯಾಂಡ್, ಹಲ್ಲೆ: ನಕಲಿ ಪತ್ರಕರ್ತರು ಅರೆಸ್ಟ್

**ಚಾಮರಾಜನಗರ:** ಗಡಿ ಜಿಲ್ಲೆ ಚಾಮರಾಜನಗರದಲ್ಲಿ ನಕಲಿ ಪತ್ರಕರ್ತರ ಹಾವಳಿ ದಿನೇ ದಿನೇ ಹೆಚ್ಚಾಗುತ್ತಿದ್ದು, ಪತ್ರಕರ್ತ ಎಂಬ ಹಣೆಪಟ್ಟಿ ಹೊತ್ತು ಸಾರ್ವಜನಿಕ ಕಾಮಗಾರಿಗಳಲ್ಲಿ ಹಣದ ದಂಧೆ ನಡೆಸುತ್ತಿರುವ ಗಂಭೀರ ಘಟನೆ ಯಳಂದೂರು ತಾಲೂಕಿನ ವೈ ಕೆ ಮೊಳೆ ಪ್ರದೇಶದಲ್ಲಿ ಬೆಳಕಿಗೆ ಬಂದಿದೆ. ರಸ್ತೆ ಕಾಮಗಾರಿ ಸಂಬಂಧಿಸಿ ಲಕ್ಷಾಂತರ ರೂಪಾಯಿ ಹಣಕ್ಕೆ ಡಿಮ್ಯಾಂಡ್ ಇಟ್ಟಿದ್ದ ಆರೋಪಿಗಳು, ಹಣ ನೀಡಲು ಒಪ್ಪದ ಮೇಸ್ತ್ರಿಯ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಳಂದೂರು ಠಾಣಾ ಪೊಲೀಸರು ಮೂವರು ನಕಲಿ ಪತ್ರಕರ್ತರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

**ರಸ್ತೆ ಕಾಮಗಾರಿ ನೆಪದಲ್ಲಿ ಹಣದ ಬೇಡಿಕೆ:** ಯಳಂದೂರಿನಿಂದ ಬಿ.ಆರ್. ಹಿಲ್ಸ್ ಸಂಪರ್ಕಿಸುವ ರಸ್ತೆ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿ ಕಳಪೆಯಾಗಿದೆ ಎಂದು ಆರೋಪಿಸುತ್ತಾ ಮೂವರು ವ್ಯಕ್ತಿಗಳು ತಮ್ಮನ್ನು ಪತ್ರಕರ್ತರು ಎಂದು ಪರಿಚಯಿಸಿಕೊಂಡಿದ್ದಾರೆ. ಕಾಮಗಾರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಚೆಲುವರಾಜ್ ಎಂಬ ಮೇಸ್ತ್ರಿಯನ್ನು ಸಂಪರ್ಕಿಸಿದ ಪುನೀತ್, ಶೇಖರ್ ಹಾಗೂ ಪುರುಷೋತ್ತಮ್ ಎಂಬ ಆರೋಪಿಗಳು, ರಸ್ತೆ ಕಾಮಗಾರಿ ಮುಂದುವರಿಯಬೇಕಾದರೆ ಹಣ ನೀಡಲೇಬೇಕೆಂದು ಒತ್ತಡ ಹಾಕಿದ್ದಾರೆ.

**ಯೂಟ್ಯೂಬ್ ಚಾನೆಲ್ ಹೆಸರು ಹೇಳಿ ಬೆದರಿಕೆ:** ಜನರಿಗೆ ಅಷ್ಟಾಗಿ ಚಿರಪರಿಚಿತವಲ್ಲದ ಯೂಟ್ಯೂಬ್ ಚಾನೆಲ್ ಹೆಸರು ಹೇಳಿಕೊಂಡು, ಪತ್ರಕರ್ತರು ಎಂಬಂತೆ ವರ್ತಿಸಿದ್ದ ಆರೋಪಿಗಳು, "ಇಲ್ಲಿ ಕಾಮಗಾರಿ ನಡೆಯಬೇಕಾದರೆ ನಮಗೆ ಕನಿಷ್ಠ 2.5 ಲಕ್ಷ ರೂಪಾಯಿ ಹಣ ನೀಡಬೇಕು. ಇಲ್ಲದಿದ್ದರೆ ಯಾವುದೇ ಕಾರಣಕ್ಕೂ ಕಾಮಗಾರಿ ನಡೆಯಲು ಬಿಡುವುದಿಲ್ಲ" ಎಂದು ಮೇಸ್ತ್ರಿ ಚೆಲುವರಾಜ್‌ಗೆ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ.

ಈ ವೇಳೆ ಮೇಸ್ತ್ರಿ ಚೆಲುವರಾಜ್, ತಾನು ಕೇವಲ ಕಾಮಗಾರಿಯಲ್ಲಿ ಕೆಲಸ ಮಾಡುವವನು ಮಾತ್ರ. ಹಣಕಾಸು ವಿಚಾರಗಳಲ್ಲಿ ತಾನು ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ. ಈ ಬಗ್ಗೆ ಗುತ್ತಿಗೆದಾರ ಅಥವಾ ಸಂಬಂಧಿಸಿದ ಎಂಜಿನಿಯರ್‌ರನ್ನು ಸಂಪರ್ಕಿಸುವಂತೆ ತಿಳಿಸಿದ್ದಾನೆ. ಆದರೆ ಇದರಿಂದ ಕೋಪಗೊಂಡ ಆರೋಪಿಗಳು ಅವಾಚ್ಯ ಶಬ್ದಗಳಿಂದ ನಿಂದಿಸಿ, ಮನಸೋ ಇಚ್ಛೆ ಮಾರಣಾಂತಿಕವಾಗಿ ಹಲ್ಲೆ ನಡೆಸಿ ಸ್ಥಳದಿಂದ ಪರಾರಿಯಾಗಿದ್ದಾರೆ.

**ಸಾರ್ವಜನಿಕರ ನಡುವೆ ಆತಂಕ:**ಘಟನೆ ನಡೆದ ನಂತರ ಸ್ಥಳದಲ್ಲಿ ಕೆಲ ಕಾಲ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸಾರ್ವಜನಿಕ ಕಾಮಗಾರಿಗಳ ಹೆಸರಿನಲ್ಲಿ ಇಂತಹ ನಕಲಿ ಪತ್ರಕರ್ತರ ದಂಧೆ ನಡೆಯುತ್ತಿರುವುದು ಜನರಲ್ಲಿ ಭಯ ಹುಟ್ಟಿಸಿದೆ. ಪತ್ರಕರ್ತರ ಹೆ ಸ ರ ನ್ನು ದು ರು ಪ ಯೋ ಗ ಪ ಡಿ ಸಿ ಕೊಂ ಡು ಹಣಕ್ಕಾಗಿ ಬೆದರಿಕೆ ಹಾಕುತ್ತಿರುವ ಘಟನೆಗಳು ಹೆಚ್ಚಾಗುತ್ತಿರುವುದರಿಂದ ನಿಜವಾದ ಪತ್ರಕರ್ತರ ಗೌರವಕ್ಕೂ ಧಕ್ಕೆ ಉಂಟಾಗಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.







**ಪೊಲೀಸರಿಂದ ತ್ವರಿತ ಕ್ರಮ:** ಘಟನೆ ಸಂಬಂಧ ಯಳಂದೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಂಡ ಪೊಲೀಸರು ಪುನೀತ್, ಶೇಖರ್ ಹಾಗೂ ಪುರುಷೋತ್ತಮ್ ಎಂಬ ಮೂವರು ಆರೋಪಿಗಳನ್ನು ಬಂಧಿಸುವಲ್ಲಿ ಯ ಶ ಸ್ವಿ ಯಾ ಗಿ ದ್ದಾ ರೆ . ಆರೋಪಿಗಳನ್ನು ವಿಚಾರಣೆ ನಡೆಸಿ ನಂತರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಪತ್ರಕರ್ತರ ಹೆಸರಿನಲ್ಲಿ ಸಾರ್ವಜನಿಕರನ್ನು ಬೆದರಿಸಿ ಹಣದ ದಂಧೆ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಇಂತಹ ನಕಲಿ ಪತ್ರಕರ್ತರ ಬಗ್ಗೆ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಮತ್ತು ಸಂಶಯಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಪೊಲೀಸ್ ಇಲಾಖೆ ಮನವಿ ಮಾಡಿದೆ.

# ನೊಂದ ಕುಟುಂಬಕ್ಕೆ ನೆರವಾದ ಹೊಸಕೋಟೆ ನಾಗರಾಜು-ಪುಷ್ಪ , ಯೋಗೇಶ್



**ಮಂಡ್ಯ:**ಜಿಲ್ಲೆಯ ಕೃಷ್ಣರಾಜಪೇಟೆ ತಾಲ್ಲೂಕಿನ ಬೊಮ್ಮಲಪುರ ಗ್ರಾಮದ ನಿವಾಸಿಗಳಾದ ಮಹೇಂದ್ರ-ಕೋಮಲ ದಂಪತಿಗಳು ಇತ್ತೀಚೆಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಅಪಘಾತದ ಪರಿಣಾಮವಾಗಿ ಕೋಮಲ ಅವರು ಒಂದು ಕಾಲು ಕಳೆದುಕೊಂಡಿದ್ದು, ಗಂಭೀರವಾಗಿ ಗಾಯಗೊಂಡಿರುವ ಅವರ ಪತಿ ಮಹೇಂದ್ರ ಅವರಿಗೂ ಒಂದು ಕಾಲು ತೆಗೆಯುವ ಅನಿವಾರ್ಯತೆ ಇದೆ ಎಂದು ವೈದ್ಯರು ತಿಳಿಸಿರುವುದು ಕುಟುಂಬವನ್ನು ತೀವ್ರ ಮಾನಸಿಕ ಹಾಗೂ ಆರ್ಥಿಕ ಸಂಕಷ್ಟಕ್ಕೆ ದೂಡಿದೆ.

ಚಿಕಿತ್ಸಾ ವೆಚ್ಚ ಭಾರವಾಗಿದ್ದು, ದಿನನಿತ್ಯದ ಜೀವನವೂ ಕಷ್ಟಕರವಾಗಿರುವ ಈ ಸಂದರ್ಭದಲ್ಲಿ ಕುಟುಂಬ ನೆರವಿಗಾಗಿ ಪರಿತಪಿಸುತ್ತಿದ್ದಾಗ, ಮಾನವೀಯತೆಯ ಸ್ಪರ್ಶದೊಂದಿಗೆ ಕೆಲವು ದಾನಿಗಳು ಸಹಾಯಕ್ಕೆ ಮುಂದಾಗಿ ಮಾನವೀಯ ಮೌಲ್ಯಗಳನ್ನು ಜೀವಂತಗೊಳಿಸಿದ್ದಾರೆ.

**₹50 ಸಾವಿರ ಧನಸಹಾಯ ಮಾಡಿದ ಹೊಸಕೋಟೆ ನಾಗರಾಜು-ಪುಷ್ಪ ದಂಪತಿ:** ಅಪಘಾತದ ವಿಷಯ ತಿಳಿದ ತಕ್ಷಣ ಹೊಸಕೋಟೆ ನಾಗರಾಜು-ಪುಷ್ಪ ದಂಪತಿಗಳು ನೊಂದ ಕುಟುಂಬಕ್ಕೆ ಸಹಾಯ ಹಸ್ತ ಚಾಚಿ, ಚಿಕಿತ್ಸೆಗಾಗಿ ₹50,000 ಧನಸಹಾಯ ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ತಮ್ಮ ವೈಯಕ್ತಿಕ ಬದುಕಿನ ಜವಾಬ್ದಾರಿಗಳ ನಡುವೆಯೂ ಸಂಕಷ್ಟದಲ್ಲಿರುವ ಕುಟುಂಬದ ನೋವನ್ನು ಅರಿತು ನೆರವಿಗೆ ಮುಂದಾದ ಈ ದಂಪತಿಯ ಕಾರ್ಯ ಸ್ಥಳೀಯರ ಪ್ರಶಂಸೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಮಾಧ್ಯಮ ಸ್ಟುಡಿಯೋ ಕಚೇರಿಯ ಸಮೀಪವರ್ತಿಗಳಾದ ಸಾಯಿ ಕುಮಾರ್ ಎನ್.ಕೆ, ರಾಜು ಜಿ.ಪಿ ಹಾಗೂ ಲೋಕೇಶ್ ವಿ ಅವರು ಬೊಮ್ಮಲಪುರದ ಈ ಕುಟುಂಬದ ಸಂಕಷ್ಟದ ಬಗ್ಗೆ ಮಾಹಿತಿ ನೀಡಿ, ಚಿಕಿತ್ಸೆಗಾಗಿ ಸಹಾಯ ಮಾಡುವಂತೆ ಮನವಿ ಮಾಡಿದರು. ಈ ಮನವಿಗೆ ಸ್ಪಂದಿಸಿದ ಮಾದಾಪುರ ಗ್ರಾಮದ ಯುವಕ ಯೋಗೇಶ್ ಅವರು ಯಾವುದೇ ಹಿಂಜರಿಕೆ ಇಲ್ಲದೆ, ನಿಸ್ವಾರ್ಥ ಪ್ರೀತಿಯಿಂದ ₹50,000 ಧನಸಹಾಯ ನೀಡಿ ಮಾನವೀಯತೆ ಮೆರೆದರು.

ಗಣ್ಯರ ಸಮ್ಮುಖದಲ್ಲಿ ಧನಸಹಾಯ ಹಸ್ತಾಂತರಿಸಿದ ಯೋಗೇಶ್ ಅವರ ನಡೆ, ಸಂಕಷ್ಟದಲ್ಲಿರುವವರಿಗೆ ಸಮಾಜ ಇನ್ನೂ ಜೀವಂತವಾಗಿದೆ ಎಂಬ ಭರವಸೆ ಮೂಡಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದವರು, ಹೊಸಕೋಟೆ ನಾಗರಾಜು-ಪುಷ್ಪ ದಂಪತಿ ಹಾಗೂ ಯುವಕ ಯೋಗೇಶ್ ಅವರ ಮಾನವೀಯ ಕಾರ್ಯವನ್ನು ಹೃತ್ಪೂರ್ವಕವಾಗಿ ಶ್ಲಾಘಿಸಿದರು. "ನೊಂದವರಿಗೆ ಸಹಾಯ ಮಾಡುವ ಶಕ್ತಿ ಭಗವಂತ ಇಂತಹ ಹೃದಯವಂತ ದಾನಿಗಳಿಗೆ ಸದಾ ಕರುಣಿಸಲಿ" ಎಂದು ಆಶಯ ವ್ಯಕ್ತಪಡಿಸಿದರು.

ಅಪಘಾತದಿಂದ ಜೀವನವೇ ತತ್ತರಿಸಿರುವ ಮಹೇಂದ್ರ-ಕೋಮಲ ದಂಪತಿಗೆ ಈ ಧನಸಹಾಯ ದೊಡ್ಡ ಆಸರೆಯಾಗಿದ್ದು, ಮುಂದಿನ ಚಿಕಿತ್ಸೆಗೆ ಸ್ವಲ್ಪವಾದರೂ ಧೈರ್ಯ ತುಂಬಿದೆ. ಸಮಾಜದಲ್ಲಿ ಇಂತಹ ಮಾನವೀಯ ಕಾರ್ಯಗಳು ಹೆಚ್ಚಾಗಬೇಕೆಂಬ ಸಂದೇಶವನ್ನು ಈ ಘಟನೆ ನೀಡುತ್ತಿದೆ.

## ಕೊನೆ ಉಸಿರಿರುವವರೆಗೂ ರಾಜ್ಯದ ಸೇವೆ ಮಾಡುತ್ತೇನೆ : ಸಿದ್ದರಾಮಯ್ಯ



**ವಿಬಿಜಿ ಗ್ರಾಮ್ ಜಿ ಕಾಯ್ದೆ ರದ್ದಾಗಿ MNREGA ಪುನ: ಸ್ಥಾಪನೆಯಾಗುವವರೆಗೆ ಮಾಡುವ ಹೋರಾಟಕ್ಕೆ ಎಲ್ಲರೂ ಸಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.**

ಅವರು ಇಂದು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಮೈಸೂರು ವತಿಯಿಂದ ಟಿ. ನರಸೀಪುರ ತಾಲೂಕಿನ ಕುಪ್ಯಾ ಗ್ರಾಮದಲ್ಲಿ ಆಯೋಜಿಸಲಾಗಿದ್ದ ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದರು.

2005 ರಲ್ಲಿ ಮನಮೋಹನ್ ಸಿಂಗ್ ಪ್ರಧಾನಿಗಳಾಗಿದ್ದಾಗ ಈ ಕಾನೂನು ಜಾರಿ ಮಾಡಿದರು. ಕೆಲಸದ ಹಕ್ಕು ಕೊಟ್ಟರು.ಅದನ್ನು ಕಿತ್ತುಹಾಕುತ್ತಿದ್ದಾರೆ. ಬಿಜೆಪಿಯವರು ಬಡವರು, ಹೆಣ್ಣುಮಕ್ಕಳು, ಕಾರ್ಮಿಕರಿಗೆ ಕೆಲಸ ಕೊಡಲು ಬಿಡುತ್ತಿಲ್ಲ. ನೀವು ಯಾವಾಗ ಕೇಳಿದರೂ ಉದ್ಯೋಗ ಕೊಡುವ ಕಾಯಿದೆಯನ್ನು ಜಾರಿ ಮಾಡಲಾಗಿತ್ತು. ಈಗ ಕೇಂದ್ರ ಸರ್ಕಾರ ಅದನ್ನು ತೀರ್ಮಾನಿಸಲಿ ದೆ. ವಿಬಿಜಿ ಗ್ರಾಮ್ ಜಿ ರದ್ದಾಗಬೇಕು. ಜನರನ್ನು ತಪ್ಪು ದಾರಿ ಎಳೆಯಲು ರಾಮ್ ಜಿ ಸೇರಿಸಿದ್ದಾರೆ. ಎಲ್ಲರೂ ಚಳುವಳಿಗೆ ತಯಾರಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು.

**MNREGA ಯೋಜನೆಯನ್ನು ಮುಂದುವರೆಸಲು ಹೋರಾಟ:**ಕೇಂದ್ರ ಸರ್ಕಾರ ಇತೀಚೆಗೆ MNREGA ಬದಲಿಗೆ ವಿಬಿಜಿ ಗ್ರಾಮ್ ಜಿ ಎಂಬ ಕಾಯ್ದೆ ಜಾರಿಗೆ ತಂದಿದ್ದಾರೆ. ಇನ್ನು ಮುಂದೆ ನರೇಗಾ ಯೋಜನೆ ಇರುವುದಿಲ್ಲ. ನಮ್ಮ ಸರ್ಕಾರ MNREGA ಯೋಜನೆಯನ್ನು ಮುಂದುವರೆಸಲು ಹೋರಾಡುತ್ತಿದೆ. ದಲಿತರಿಗೆ, ಹೆಣ್ಣುಮಕ್ಕಳಿಗೆ ಮೂರು ದಿನ ಕೆಲಸ ಕೊಡುವ ಕಾಯ್ದೆ.ಅದು ಸಂವಿಧಾನದ ಹಕ್ಕು. ಅದನ್ನು ಯಾವುದೇ ಕಾರಣಕ್ಕೂ ರದ್ದು ಮಾಡಬಾರದೆಂಬ ಒತ್ತಡವನ್ನು ಹಾಕಲಾಗುತ್ತಿದೆ ಎಂದರು.

**ವರುಣಾ ಕ್ಷೇತ್ರದಲ್ಲಿ ಒಟ್ಟು 1932 ಕೋಟಿ ರೂ.ಗಳ ಕಾಮಗಾರಿ**

ಕುಪ್ಯಾ ಗ್ರಾಮದಲ್ಲಿ ಸುಮಾರು 323ಕೋಟಿ ರೂ.ಗಳ ಕಾಮಗಾರಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಾಗಿದೆ. ಈ ಬಾರಿ ಅಧಿಕಾರಕ್ಕೆ ಬಂದ ನಂತರ ಮೂರು ಬಾರಿ ವರುಣಾ ಕ್ಷೇತ್ರದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. 22/10/2024 ರಲ್ಲಿ 501 ಕೋಟಿ ರೂ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿತ್ತು. ನಂತರ 9/8/2025 ರಂದು 1108 ಕೋಟಿ ರೂ ಗಳ ಕಾರ್ಯಕ್ರಮ. ಮತ್ತು ಇಂದು 323 ಕೋಟಿ ಸೇರಿದಂತೆ ಒಟ್ಟು 1932 ಕೋಟಿ ರೂ.ಗಳ ಕಾಮಗಾರಿಗಳಿಗೆ ವರುಣಾ ಕ್ಷೇತ್ರದಲ್ಲಿ ಚಾಲನೆ ನೀಡಲಾಗಿದೆ. 1500ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ನೆರವೇರಿಸಿದೆ. ಅಭಿವೃದ್ಧಿ ಮತ್ತು ಗ್ಯಾರಂಟಿ ಯೋಜನೆಗಳಿಗೆ ವೆಚ್ಚ ಮಾಡಲಾಗಿದೆ ಎಂದರು.

**ಮೈಸೂರು ಜಿಲ್ಲೆಯಲ್ಲಿ ಸುಮಾರು 10,000 ಕೋಟಿ ರೂಗಳ ಅಭಿವೃದ್ಧಿ ಕಾಮಗಾರಿಗಳು:**ವಿರೋಧ ಪಕ್ಷದವರು ನಮ್ಮ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ. ಸರ್ಕಾರದಲ್ಲಿ ಅಭಿವೃದ್ಧಿಗೆ ಹಣವಿಲ್ಲ ಎಂಬ ಆರೋಪಗಳನ್ನು ಮಾಡುತ್ತಿದ್ದಾರೆ. ಎರಡುವರೆ ವರ್ಷಗಳಲ್ಲಿ 1932 ಕೋಟಿ ಗಳನ್ನು ಕೇವಲ ಅಭಿವೃದ್ಧಿಗಾಗಿಯೇ ವೆಚ್ಚ ಮಾಡಲಾಗಿದೆ. ಖಜಾನೆ ಖಾಲಿಯಾಗಿದ್ದರೆ ಇದು ಸಾಧ್ಯವಾಗುತ್ತಿರಲಿಲ್ಲ. ಮೈಸೂರು ಜಿಲ್ಲೆಯಲ್ಲಿ ಸುಮಾರು 10,000 ಕೋಟಿ ರೂಗಳನ್ನು ವೆಚ್ಚ ಮಾಡಲಾಗಿದೆ. ಇದೇ ರೀತಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿಯೂ ಅಭಿವೃದ್ಧಿಗಾಗಿ ಸರ್ಕಾರ ಕ್ರಮ ಕೈಗೊಂಡಿದೆ. 1,15,000 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ವೆಚ್ಚ ಮಾಡಲಾಗಿದೆ. ವಿರೋಧ ಪಕ್ಷದವರು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

**ಮೈಸೂರಿಗೆ ಬಂದಾಗಲೆಲ್ಲಾ ಜನರನ್ನು ಭೇಟಿ ಮಾಡುವ ಪ್ರಯತ್ನ:**ವರುಣಾ ಕ್ಷೇತ್ರವನ್ನು ಮೇಲ್ಮನೆ ಸದಸ್ಯರು ಸಂಪೂರ್ಣವಾಗಿ ನೋಡಿಕೊಳ್ಳುತ್ತಿದ್ದು, ನನ್ನ ಗೈರುಹಾಜರಿಯಲ್ಲಿ ಕ್ಷೇತ್ರದ ಜನರ ಕಷ್ಟ, ಸುಖಗಳನ್ನು ಆಲಿಸುವವರು ಡಾ. ಯತೀಂದ್ರ ಎಂದರು. ಅವರಿಗೆ ಕ್ಷೇತ್ರದ ಎಲ್ಲಾ ಗ್ರಾಮಗಳ ಪರಿಚಯವಿದೆ. ವಾರಕ್ಕೆ ಎರಡು ಮೂರು ಸಾರಿ ಬಂದು ನಿಮ್ಮ ಕಷ್ಟಗಳಿಗೆ ಸ್ಪಂದಿಸುತ್ತಿದ್ದಾರೆ. ಮೈಸೂರಿಗೆ ಬಂದಾಗಲೆಲ್ಲಾ ಜನರನ್ನು ಭೇಟಿ ಮಾಡುವ ಪ್ರಯತ್ನ ಮಾಡುತ್ತೇನೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ, ಸಚಿವರಾದ ಶರಣ ಪ್ರಕಾಶ್ ಪಾಟೀಲ್, ಡಾ: ಎಂ.ಸಿ.ಸುಧಾಕರ್, ಸಂಸದ ಸುನೀಲ್ ಬೋಸ್, ವಿಧಾನ ಪರಿಷತ್ ಸದಸ್ಯರಾದ ಯತೀಂದ್ರ ಸಿದ್ದರಾಮಯ್ಯ,
ಮಾಜಿ ಸಚಿವರು ಹಾಗೂ ರಾಜ್ಯ ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಮೇಲ್ಮನೆ ಸದಸ್ಯರಾದ ಡಾ: ತಿಮ್ಮಯ್ಯ, ಶಾಸಕ ರವಿಶಂಕರ್ ಸೇರಿ ಮೊದಲಾದವರು ಉಪಸ್ಥಿತರಿದ್ದರು.

## ಮ್ಯಾಟ್ರಿಮೋನಿ ಮೋಸ: ಹೆಂಡತಿಯನ್ನು ಅಕ್ಕ ಎಂದ ಖದೀಮ

**ಬೆಂಗಳೂರು:**ಮ್ಯಾಟ್ರಿಮೋನಿ ವೆಬ್‌ಸೈಟ್ ಮೂಲಕ ಪರಿಚಯ ಮಾಡಿಕೊಂಡ ಯುವತಿಯನ್ನು ಮದುವೆಯಾಗುವುದಾಗಿ ನಂಬಿಸಿ, ವಿವಾಹಿತನಾಗಿದ್ದರೂ ತನ್ನ ಹೆಂಡತಿಯನ್ನು "ಅಕ್ಕ" ಎಂದು ಪರಿಚಯಿಸಿ ಕೋಟ್ಯಂತರ ರೂಪಾಯಿ ಹಣ ವಂಚಿಸಿರುವ ಅಚ್ಚರಿಯ ಹಾಗೂ ಆತಂಕಕಾರಿ ಘಟನೆ ಬೆಂಗಳೂರಿನಲ್ಲಿ ಬೆಳಕಿಗೆ ಬಂದಿದೆ. ಈ ಘಟನೆಯಲ್ಲಿ ವೈಟ್‌ಫೀಲ್ಡ್ ನಿವಾಸಿಯಾದ ಸಾಫ್ಟ್‌ವೇರ್ ಎಂಜಿನಿಯರ್ ಯುವತಿಗೆ ಸುಮಾರು ₹1.75 ಕೋಟಿ ರೂಪಾಯಿ ನಷ್ಟ ಉಂಟಾಗಿದ್ದು, ಆರೋಪಿಯ ಕುಟುಂಬದ ಮೂವರು ಸದಸ್ಯರ ವಿರುದ್ಧ ಪೊಲೀಸರು ವಂಚನೆ ಪ್ರಕರಣ ದಾಖಲಿಸಿಕೊಂಡಿದ್ದಾರೆ.



**ಮ್ಯಾಟ್ರಿಮೋನಿ ವೆಬ್‌ಸೈಟ್‌ನಲ್ಲಿ ಪರಿಚಯ:**ವೃತ್ತಿಯಲ್ಲಿ ಸಾಫ್ಟ್‌ವೇರ್ ಎಂ ಜಿನಿಯರ್ ಆಗಿರುವ ವೈಟ್‌ಫೀಲ್ಡ್ ನಿವಾಸಿ ಯುವತಿಗೆ, 2024ರ ಮಾರ್ಚ್ ತಿಂಗಳಲ್ಲಿ ಮ್ಯಾಟ್ರಿಮೋನಿ ವೆಬ್‌ಸೈಟ್ ಮೂಲಕ ವಿಜಯ್ ರಾಜ್ ಗೌಡ ಎಂಬಾತನ ಪರಿಚಯವಾಗಿದೆ. ಮೊದಲ ಭೇಟಿಯಲ್ಲೇ ತಾನು ದೊಡ್ಡ ಉದ್ಯಮಿ, ತನ್ನ ಬಳಿ 715 ಕೋಟಿ ರೂಪಾಯಿ ಮೌಲ್ಯದ ಆಸ್ತಿ ಇದೆ, ವಿವಿಧ ಉದ್ಯಮಗಳಲ್ಲಿ ಹೂಡಿಕೆ ಮಾಡಿದ್ದೇನೆ ಎಂದು ಐಶಾರಾಮಿ ಜೀವನದ ಕಥೆಗಳನ್ನು ಹೇಳಿ ಯುವತಿಯನ್ನು ನಂಬುವಂತೆ ಮಾಡಿದ್ದಾನೆ.

**ನಿನ್ನನ್ನೇ ಮದುವೆಯಾಗುತ್ತೇನೆ' ಎಂಬ ಭರವಸೆ**

ತಾನು ಈಗಾಗಲೇ ವಿವಾಹಿತನಾಗಿದ್ದ ಸಂಗತಿಯನ್ನು ಮುಚ್ಚಿಟ್ಟ ಆರೋಪಿಯು, "ನಿನ್ನನ್ನೇ ಮದುವೆಯಾಗುತ್ತೇನೆ" ಎಂದು ಭರವಸೆ ನೀಡಿ ಯುವತಿಯ ವಿಶ್ವಾಸ ಗಳಿಸಿದ್ದಾನೆ. ಕೆಂಗೇರಿ ಬಳಿ ಇರುವ ತನ್ನ ಮನೆಗೆ ಕರೆಸಿ ಕುಟುಂಬದವರನ್ನು ಪರಿಚಯಿಸುವ ವೇಳೆ, ತನ್ನ ನಿಜವಾದ ಹೆಂಡತಿಯನ್ನು ಸ್ವಂತ ಅಕ್ಕ ಎಂದು ಯುವತಿಗೆ ಪರಿಚಯಿಸಿ ನಾಟಕ ನಡೆಸಿದ್ದಾನೆ. ಈ ನಾಟಕೀಯ ವರ್ತನೆಯಿಂದ ಯುವತಿಗೆ ಯಾವುದೇ ಸಂಶಯ ಮೂಡದೇ, ಆತನ ಮಾತುಗಳಿಗೆ ಮಾರು ಹೋಗಿದ್ದಾಳೆ.

**ಇಡಿ ಕೇಸ್ ಇದೆ' ಎಂದು ಹಣಕ್ಕೆ ಬೇಡಿಕೆ**

ಪರಿಚಯವಾದ ಕೆಲವೇ ದಿನಗಳಲ್ಲಿ, ನನ್ನ ವಿರುದ್ಧ ಆಸ್ತಿ ಸಂಬಂಧಿತ ಇಡಿ (ED) ಪ್ರಕರಣ ದಾಖಲಾಗಿದೆ. ಬ್ಯಾಂಕ್ ಖಾತೆಗಳು ಫ್ರೀಜ್ ಆಗಿವೆ ಎಂದು ಆರೋಪಿಯು ಹೇಳಿಕೊಂಡಿದ್ದಾನೆ. ಕೋರ್ಟ್ ದಾಖಲೆಗಳು ಹಾಗೂ ನಕಲಿ ಕಾಗದ ಪತ್ರಗಳನ್ನು ಯುವತಿಗೆ ತೋರಿಸಿ ಮೊದಲ ಹಂತದಲ್ಲಿ ₹15 ಸಾವಿರ ರೂಪಾಯಿ ಪಡೆದುಕೊಂಡಿದ್ದಾನೆ. ನಂತರ "ಒಟ್ಟಿಗೆ ಬಿಸಿನೆಸ್ ಮಾಡೋಣ" ಎಂದು ನಂಬಿಸಿ, ಯುವತಿಯ ಹೆಸರಿನಲ್ಲಿ ಲೋನ್ ಮಾಡಿಸಿದ್ದು, ಆಕೆಯ ಸ್ನೇಹಿತರ ಬಳಿಯೂ ಸಾಲ ಪಡೆಯುವಂತೆ ಪ್ರೇರೇಪಿಸಿದ್ದಾನೆ.

**ಹಂತ ಹಂತವಾಗಿ ಕೋಟಿ ಕೋಟಿ ವಂಚನೆ:**ಮದುವೆಗೆ ಹೆಣ್ಣು ನೋಡಲು ಬರುತ್ತೇವೆ, ಮದುವೆ ದಿನಾಂಕ ನಿಶ್ಚಯಿಸೋಣ ಎಂದು ಭರವಸೆ ನೀಡಿ, ಮತ್ತೆ ಮತ್ತೆ ಹಣ ಪಡೆದಿದ್ದಾನೆ. ಯುವತಿಯ ಸ್ನೇಹಿತರು ಹಾಗೂ ಸಂಬಂಧಿಕರಿಂದಲೂ ಲಕ್ಷಾಂತರ ರೂಪಾಯಿ ಸಾಲವಾಗಿ ಪಡೆದು, ಹಂತಹಂತವಾಗಿ ಒಟ್ಟು ₹1.75 ಕೋಟಿ ರೂಪಾಯಿ ವಂಚನೆ ನಡೆಸಿದ್ದಾನೆ.

ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಕೇಸ್ ನಡೆಯುತ್ತಿದೆ, ಹಣ ಬಿಡುಗಡೆ ಆಗಲಿದೆ ಎಂದು ನಿರಂತರ ಸುಳ್ಳು ಹೇಳಿ ಸಮಯ ಕಳೆಯುತ್ತಿದ್ದಾನೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

**ಹಣ ಕೇಳಿದಾಗ ಬೆದರಿಕೆ, ಅಸಲಿ ಸತ್ಯ ಬಹಿರಂಗ:**ಹಣದ ಒತ್ತಡ ಹೆಚ್ಚಾದಾಗ ಆರೋಪಿಯು ಕೇವಲ ₹22 ಲಕ್ಷ ರೂಪಾಯಿ ಮಾತ್ರ ವಾಪಸ್ ನೀಡಿ, ಉಳಿದ ಹಣ ಕೊಡಲು ಹಿಂದೇಟು ಹಾಕಿದ್ದಾನೆ. ಹಣ ಕೇಳಲು ಹೋದ ಯುವತಿ ಹಾಗೂ ಆಕೆಯ ಸ್ನೇಹಿತರಿಗೆ ಬೆದರಿಕೆ ಹಾಕಿರುವ ಆರೋಪವೂ ಕೇಳಿಬಂದಿದೆ. ಇದೇ ಸಂದರ್ಭದಲ್ಲಿ ಆರೋಪಿಯ ಅಸಲಿ ಮುಖವಾಡ ಬಯಲಾಗಿದ್ದು, ಆತ ಈಗಾಗಲೇ ಮದುವೆಯಾಗಿದ್ದು, ಮಗುವೂ ಹೊಂದಿರುವುದು ಯುವತಿಗೆ ತಿಳಿದುಬಂದಿದೆ.

**ಪೊಲೀಸ್ ದೂರು, ತನಿಖೆ ಆರಂಭ:**ತಾನು ಮೋಸ ಹೋಗಿರುವುದು ಖಚಿತವಾದ ಬಳಿಕ, ಯುವತಿ ವೈಟ್‌ಫೀಲ್ಡ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾಳೆ. ಪ್ರಕರಣದ ವ್ಯಾಪ್ತಿ ಕೆಂಗೇರಿ ಠಾಣೆ ವ್ಯಾಪ್ತಿಗೆ ಬರುವುದರಿಂದ, ನಂತರ ಪ್ರಕರಣವನ್ನು ಕೆಂಗೇರಿ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ವಿಜಯ್ ರಾಜ್ ಗೌಡ, ಬೋರೆಗೌಡ ಹಾಗೂ ಸೌಮ್ಯ ವಿರುದ್ಧ ವಂಚನೆ ಪ್ರಕರಣ ದಾಖಲಾಗಿದ್ದು, ಪೊಲೀಸರು ಸದ್ಯ ಆರೋಪಿಗಳ ಪಾತ್ರದ ಕುರಿತು ತನಿಖೆ ನಡೆಸುತ್ತಿದ್ದಾರೆ.

ಈ ಪ್ರಕರಣವು ಮ್ಯಾಟ್ರಿಮೋನಿ ವೆಬ್‌ಸೈಟ್ ಮೂಲಕ ನಡೆಯುವ ವಂಚನೆಗಳ ಅಪಾಯವನ್ನು ಮತ್ತೊಮ್ಮೆ ಬಹಿರಂಗಪಡಿಸಿದ್ದು, ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕೆಂಬ ಸಂದೇಶವನ್ನು ನೀಡುತ್ತಿದೆ.

# ಮಾಟ-ಮಂತ್ರ ಮಾಡುತ್ತಿದ್ದ ಪೂಜಾರಿಯ ಬರ್ಬರ ಹತ್ಯೆ

**ಕೋಲಾರ:** ಅವರು ಊರಿನಲ್ಲಿ ಕಾಳಿ ದೇವಿಯ ದೇವಾಲಯ ನಿರ್ಮಾಣ ಮಾಡಿಕೊಂಡು ಆರಾಧನೆ ಮಾಡಿಕೊಂಡಿದ್ದರು. ದೇವಾಲಯಕ್ಕೆ ಬರುವ ಜನರಿಗೆ ದೆವ್ವ, ಗಾಳಿ ಬಿಡಿಸುವ ಕೆಲಸವೂ ಮಾಡುತ್ತಿದ್ದರು. ಹೀಗೆ ಮಾಟ-ಮಂತ್ರ ಮಾಡಿಕೊಂಡಿದ್ದ ಪೂಜಾರಿ ನಿನ್ನೆ ಪುಷ್ಯ ಅಮಾವಾಸ್ಯೆ ಹಿನ್ನೆಲೆ ಪೂಜೆ ಮುಗಿಸಿಕೊಂಡು ಬರುವಾಗ ದುಷ್ಕರ್ಮಿಗಳು ಅಡ್ಡಗಟ್ಟಿ ಬರ್ಬರವಾಗಿ ಹತ್ಯೆ ಮಾಡಿದ್ದಾರೆ. ಜಿಲ್ಲೆಯ ಮಾಲೂರು ತಾಲೂಕಿನ ಹರಳೇರಿ ಬಳಿ ಘಟನೆ ನಡೆದಿದೆ. ಆಂಜಿ ಅಲಿಯಾಸ್ ಆಂಜಿನಪ್ಪ(45) ಕೊಲೆಯಾದ ಪೂಜಾರಿ. ಘಟಣಾ ಸ್ಥಳಕ್ಕೆ ಮಾಲೂರು ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.



**ನಡೆದದ್ದೇನು?:**ನಿನ್ನೆ ಮಾಲೂರು ಪಟ್ಟಣದಲ್ಲಿ ಹಿಂದೂ ಸಮಾಜೋತ್ಸವ ಸಮಿತಿ ವತಿಯಿಂದ ಮಾಲೂರು ಪಟ್ಟಣದ ಹೋಂಡಾ ಸ್ಟೇಡಿಯಂನಲ್ಲಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಹೀಗಾಗಿ ಮಾಲೂರು ಪಟ್ಟಣದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಸಾವಿರಾರು ಜನರು ಹಿಂದೂ ಸಮಾಜೋತ್ಸವ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಈ ವೇಳೆ ಪೊಲೀಸರ ಗಮನವೆಲ್ಲಾ ಹಿಂದೂ ಸಮಾಜೋತ್ಸವ ಕಾರ್ಯಕ್ರಮದ ಮೇಲಿತ್ತು. ಹೀಗಿರುವಾಗಲೇ ಇನ್ನೇನು ಕಾರ್ಯಕ್ರಮ ಅಂತಿಮ ಹಂತ ತಲುಪುವುದರಲ್ಲಿತ್ತು, ಅಷ್ಟರಲ್ಲಿ ವ್ಯಕ್ತಿಯೊಬ್ಬನನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ ಎಂಬ ಮಾಹಿತಿಯೊಂದು ಮಾಲೂರು ಪೊಲೀಸರಿಗೆ ಬಂದಿದೆ.

ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಪೊಲೀಸರಿಗೆ ಅಲ್ಲಿ ಬೈಕ್‌ನಲ್ಲಿ ಬರ್ತಿದ್ದ ಹುಲ್ಕೂರು ಗ್ರಾಮದ ಕಾಳಿ ದೇವಾಲಯದ ಪೂಜಾರಿ ಮಾಲೂರು ಪಟ್ಟಣ ನಿವಾಸಿ ಆಂಜಿ ಅಲಿಯಾಸ್ ಆಂಜಿನಪ್ಪರನ್ನ ದುಷ್ಕರ್ಮಿಗಳು ಅಡ್ಡಗಟ್ಟಿ ಮುಖಕ್ಕೆ ಖಾರದಪುಡಿ ಎರಚಿ ಲಾಂಗಿನಿಂದ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿರುವುದು ಕಂಡುಬಂದಿತ್ತು.

ಆಂಜಿನಪ್ಪ ದೇವಾಲಯದ ಪೂಜಾರಿ ಜೊತೆಗೆ ಮಾಲೂರಿನಲ್ಲಿ ಬೂಸಾ ಅಂಗಡಿ ಇಟ್ಟುಕೊಂಡು ಜೀವನ ನಡೆಸುತ್ತಿದ್ದರು. ವಿಷಯ ತಿಳಿದು ಕೂಡಲೇ ಸ್ಥಳಕ್ಕೆ ಬಂದಿದ್ದ ಶ್ವಾನದಳ, ಸೋಕೋ ಟೀಂ ಸೇರಿದಂತೆ ಹಿರಿಯ ಅಧಿಕಾರಿಗಳು ಪರಿಶೀಲನೆ ನಡೆಸಿದ್ದರು. ಈ ವೇಳೆ ನಿನ್ನೆ ಪುಷ್ಯ ಅಮಾವಾಸ್ಯೆ ಹಿನ್ನೆಲೆಯಲ್ಲಿ ಹುಲ್ಕೂರು ಬಳಿಯ ದೇವಾಲಯದಲ್ಲಿ ಪೂಜೆ ಮುಗಿಸಿಕೊಂಡು ವಾಪಸ್ಸಾಗುವ ವೇಳೆ ಹೀಗೆ ಬರ್ಬರವಾಗಿ ಹತ್ಯೆಯಾಗಿರುವುದು ತಿಳಿಸಿದೆ.

**ಎರಡನೇ ಮದುವೆ:**ಇನ್ನು ಆಂಜಿನಪ್ಪ ಅವರಿಗೆ ಕಳೆದ ಮೂವತ್ತು ವರ್ಷಗಳ ಹಿಂದೆ ಚಿಂತಾಮಣಿ ಮೂಲದ ವಿಜಿಯಮ್ಮ ಎಂಬುವವರೊಂದಿಗೆ ಮದುವೆಯಾಗಿತ್ತು. ದಂಪತಿಗೆ ಇಬ್ಬರು ಮಕ್ಕಳಿದ್ದು, ಮದುವೆಯಾಗಿದೆ. ಇತ್ತೀಚೆಗೆ ಅಂದರೆ ಕಳೆದ ಐದು ವರ್ಷಗಳ ಹಿಂದೆ ಬೆಂಗಳೂರು ವೈಟ್ ಫೀಲ್ಡ್ ನಿವಾಸಿ ಸಂಗೀತ ಎಂಬುವವರನ್ನು ಎರಡನೇ ಮದುವೆ ಮಾಡಿಕೊಂಡಿದ್ದರು.

ಆಂಜಿನಪ್ಪ ಕಳೆದ 5 ವರ್ಷಗಳ ಹಿಂದೆ ತಮ್ಮೂರು ಹುಲ್ಕೂರಿನಲ್ಲಿ ಕಾಳಿ ದೇವಾಲಯ ನಿರ್ಮಾಣ ಮಾಡಿಕೊಂಡು ಬರುವ ಭಕ್ತರಿಗೆ ಪೂಜೆ ಮಾಡಿಕೊಂಡು, ಬ್ಲಾಕ್ ಮ್ಯಾಜಿಕ್, ಮಾಟ-ಮಂತ್ರ ಮಾಡಿಕೊಂಡು ಒಂದಷ್ಟು ಹಣ ಸಂಪಾದನೆ ಮಾಡಿಕೊಂಡಿದ್ದರು. ಜೊತೆಗೆ ಸ್ಥಳೀಯವಾಗಿ ಒಂದಷ್ಟು ಜನರಿಗೆ ಸಹಾಯ ಮಾಡಿಕೊಂಡಿದ್ದ ಆಂಜಿನಪ್ಪ ಮೇಲೆ ಗ್ರಾಮದ ಜನರಿಗೆ ಹಾಗೂ ಅಲ್ಲಿಗೆ ಬರುತ್ತಿದ್ದ ಭಕ್ತರಿಗೂ ಒಳ್ಳೆಯ ಅಭಿಪ್ರಾಯವಿತ್ತು. ಈ ದೇವಾಲಯಕ್ಕೆ ರಾಜ್ಯದ ನಾನಾ ಭಾಗಗಳಿಂದ ಜನರು ಹಲವು ಸಮಸ್ಯೆಗಳನ್ನು ಹಿಡಿದುಕೊಂಡು ಬರುತ್ತಿದ್ದರು. ಕೆಲವರಿಗೆ ದೆವ್ವ ಹಿಡಿದಿದ್ದರೆ, ನನಗೆ ಯಾರೋ ಕೆಡಕು ಮಾಡಿದ್ದಾರೆ ಎಂದೆಲ್ಲಾ ಹೇಳಿಕೊಂಡು ಬರುತ್ತಿದ್ದರು. ಅಂತವರಿಗೆ ಆಂಜಿನಪ್ಪ ಪರಿಹಾರ ನೀಡುತ್ತಿದ್ದರು. ಹೀಗೆ ಸಾಕಷ್ಟು ಜನರಿಗೆ ಇವರಿಂದ ಅನುಕೂಲವೂ ಆಗಿದೆ, ಅನಾನುಕೂಲವೂ ಆಗಿರಬಹುದು. ಜೊತೆಗೆ ಗ್ರಾಮದಲ್ಲಿ ದೇವಾಲಯದ ನಿರ್ಮಾಣದ ವೇಳೆ ಗ್ರಾಮದ ಸ್ಮಶಾನ ಒತ್ತುವರಿ ಮಾಡಿಕೊಂಡಿದ್ದಾರೆ ಅನ್ನೋ ವಿಚಾರವಾಗಿ ಗ್ರಾಮದ ಕೆಲವರೊಂದಿಗೆ ಮನಸ್ತಾಪವಾಗಿತ್ತು ಎನ್ನಲಾಗುತ್ತಿದೆ. ಸದ್ಯ ದುಷ್ಕರ್ಮಿಗಳು ಪೂಜಾರಿಯನ್ನು ನಿನ್ನೆ ಬರ್ಬರವಾಗಿ ಕೊಲೆ ಮಾಡಿದ್ದು, ಹತ್ಯೆಗೆ ಕಾರಣ ಏನು ಅನ್ನೋದು ತಿಳಿಯಬೇಕಿದೆ. ಇನ್ನು ಪ್ರಕರಣ ದಾಖಲಿಸಿಕೊಂಡಿರುವ ಮಾಲೂರು ಪೊಲೀಸರು ತನಿಖೆ ಕೈಗೊಂಡಿದ್ದು, ಆರೋಪಿಗಳಿಗಾಗಿ ಬಲೆಬೀಸಿದ್ದಾರೆ.

ಒಟ್ಟಾರೆ ಪೂಜೆ ಪುನಸ್ಕಾರ, ಆರಾಧನೆ, ಮಾಟ, ಮಂತ್ರ ಮಾಡಿಕೊಂಡಿದ್ದ ವ್ಯಕ್ತಿಯನ್ನು ಏಕಾಏಕಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಸದ್ಯ ಕೊಲೆಗೆ ಕುಟುಂಬದಲ್ಲಿ ಏನಾದ್ರು ಸಮಸ್ಯೆ ಇತ್ತಾ, ಹಣಕಾಸಿನ ವ್ಯವಹಾರ, ಸ್ಮಶಾನದ ವಿಚಾರವೇ ಸಾವಿಗೆ ಕಾರಣವಾಯ್ತಾ? ಹೀಗೆ ಹತ್ತು ಹಲವು ಆಯಾಮಗಳಲ್ಲಿ ಮಾಲೂರು ಪೊಲೀಸರು ತನಿಖೆ ನಡೆಸುತ್ತಿದ್ದು, ತನಿಖೆಯಿಂದಲೇ ಕೊಲೆಗೆ ನಿಖರ ಕಾರಣ ತಿಳಿದು ಬರಲಿದೆ.

## ಲಿವ್ ಇನ್ ಸಂಗಾತಿಯ ಕೊಂದು ದೇಹವನ್ನು ಟ್ರಂಕ್ ನಲ್ಲಿ ಹಾಕಿ ಸುಟ್ಟ ವ್ಯಕ್ತಿ



**ಉತ್ತರ ಪ್ರದೇಶ:** ಝಾನ್ಸಿಯಲ್ಲಿ ನಿವೃತ್ತ ರೈಲ್ವೆ ಉದ್ಯೋಗಿಯೊಬ್ಬ ಹಣಕಾಸು ವಿವಾದದ ಹಿನ್ನೆಲೆ ತನ್ನ ಲಿವ್-ಇನ್ ಸಂಗಾತಿಯನ್ನು ಹತ್ಯೆ ಮಾಡಿ, ಮೃತದೇಹವನ್ನು ಬಾಕ್ಸ್‌ನಲ್ಲಿ ಹಾಕಿ ಸುಟ್ಟು ಸಾಕ್ಷ್ಯ ನಾಶಪಡಿಸಿರುವ ಭೀಕರ ಘಟನೆ ಬೆಳಕಿಗೆ ಬಂದಿದೆ. ಆರೋಪಿ ರಾಮ್ ಸಿಂಗ್ ಪರಿಹಾರ್, ಮಹಿಳೆ ತನ್ನಿಂದ ನಿರಂತರವಾಗಿ ಹಣ ಬೇಡಿಕೆ ಇಡುತ್ತಿದ್ದುದರಿಂದ ಕೊಲೆ ಮಾಡಿದ್ದೇನೆ ಎಂದು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾನೆ.

ಮೃತದೇಹವನ್ನು ಸುಟ್ಟ ಬಳಿಕ ಬೂದಿಯನ್ನು ಚೀಲಗಳಲ್ಲಿ ಸಂಗ್ರಹಿಸಿ ನದಿಗೆ ಎಸೆದಿದ್ದು, ಉಳಿದ ಅವಶೇಷಗಳನ್ನು ಟ್ರಂಕ್‌ನಲ್ಲಿ ವಿಲೇವಾರಿ ಮಾಡಲು ಸಂಚು ರೂಪಿಸಿದ್ದಾನೆ. ದಪ್ಪ ನೀಲಿ ಟ್ರಂಕ್ ಸಾಗಿಸುವ ವೇಳೆ ಲೋಡರ್ ಚಾಲಕನಿಗೆ ಅನುಮಾನ ಬಂದು ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡಿದ ಪರಿಣಾಮ ಪ್ರಕರಣ ಬಹಿರಂಗವಾಗಿದೆ. ಪೊಲೀಸರು ಆರೋಪಿಯನ್ನು ಬಂಧಿಸಿ ಕೊಲೆ ಹಾಗೂ ಸಾಕ್ಷ್ಯ ನಾಶ ಪ್ರಕರಣದಲ್ಲಿ ತನಿಖೆ ಮುಂದುವರಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.